# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## *ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ ವಾರ್ಡಿಗೆ ಸಂಬಂಧಿಸಿದಂತೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ವ್ಯಾಪ್ತಿಯಲ್ಲಿರುವ ಹಚ್ಚಿನ್ಸ್ ಪಾರ್ಕ್‌ನಲ್ಲಿ ದಿನಾಂಕ: 25-11-2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು*

**ಹಾಜರಿದ್ದ ಸದಸ್ಯರು,**

1. ಶ್ರೀ ನಾರಾಯಣಸ್ವಾಮಿ ಅಧ್ಯಕ್ಷರು ಹಾಗೂ ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು,
2. ಶ್ರೀ ಕೆ ಶ್ರೀಕಾಂತ್, ಸದಸ್ಯ ಕಾರ್ಯದರ್ಶಿಗಳು ಮತ್ತು ಸಂಚಾಲಕರು,

**ಹಾಜರಿದ್ದ ಅಧಿಕಾರಿ/ಸ್ಥಳೀಯರುಗಳು**

1. ಶ್ರೀ ಮಣಿಶಂಕರ್, ಹಿರಿಯ ಆರೋಗ್ಯ ನಿರೀಕ್ಷಕರು,
2. ಶ್ರೀ ಇಂದಿರಾ ಅರುಣ್, ರಿವೋಬ್ ಅಸೋಸಿಯೇಷನ್,
3. ಶ್ರೀ/ಶ್ರೀಮತಿ ರೋಸಿತಾ, ರೆಸಿಡೆನ್ಸಿಯಲ್ ವೆಲ್‌ಫೇರ್ ಅಸೋಸಿಯೇಷನ್
4. ಶ್ರೀ ಕಿಶೋರ್.ಇ.ಎಸ್, ಕಿರಿಯ ಆರೋಗ್ಯ ಪರಿವೀಕ್ಷಕರು,
5. ಸ್ಥಳೀಯರು,

ಈ ಸಭೆಗೆ ಹಾಜರಾಗಿದ್ದ ಅಧ್ಯಕ್ಷರು (ನೋಡೆಲ್ ಅಧಿಕಾರಿ) ಹಾಗೂ ಅಧಿಕಾರಿಗಳನ್ನು ವಾರ್ಡ್‌ನ ಸದಸ್ಯ ಕಾರ್ಯದರ್ಶಿ ಹಾಗೂ ಸಂಚಾಲಕರು, ವಾರ್ಡ್ ಕಮಿಟಿ ಸಮಿತಿ ಸಭೆಯಲ್ಲಿ ಹಾಜರಿದ್ದ ಅಧಿಕಾರಿ/ನೌಕರರು ಹಾಗೂ ಸದಸ್ಯರುಗಳನ್ನು ಸ್ವಾಗತ ಕೋರಿ, ಸಭೆಯನ್ನು ಪ್ರಾರಂಭಿಸಲಾಯಿತು.

1) ವಾರ್ಡ್ ವ್ಯಾಪ್ತಿಯಲ್ಲಿ ಹಾಲೀ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರ ವಿವರ ಹಾಗೂ ಸದರಿ ಪೌರಕಾರ್ಮಿಕರಿಗೆ ನಿಯೋಜಿಸಿರುವ ರಸ್ತೆಗಳ ವಿವರಗಳನ್ನು ಸಲ್ಲಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಪೌರಕಾರ್ಮಿಕರ ವಿವರ ಹಾಗೂ ನಿಯೋಜಿಸಿರುವ ರಸ್ತೆಗಳ ವಿವರಗಳನ್ನು ನೀಡಲು ಆರೋಗ್ಯ ನಿರೀಕ್ಷಕರಿಗೆ ತಿಳಿಸಿದರು.

2) ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಅಂಗಡಿ ಹಾಗೂ ವಾಣಿಜ್ಯ ಮಳಿಗೆ ಮಾಲೀಕರು ಪಾಲಿಕೆ ವತಿಯಿಂದ ಯಾವುದೇ ಪರವಾನಿಗೆ ಪಡೆಯದೇ ವಾಣಿಜ್ಯ ಚಟುವಟಿಕೆಗಳನ್ನು ಮಾಡುತ್ತಿರುವುದು ಕಂಡು ಬಂದಿದ್ದು, ವಾರ್ಡ್ ವ್ಯಾಪ್ತಿಯಲ್ಲಿರುವ ವಾಣಿಜ್ಯ ಮಳಿಗೆ ಹಾಗೂ ಅಂಗಡಿಗಳನ್ನು ಪರಿಶೀಲಿಸಿ, ಪರವಾನಿಗೆ ಪಡೆಯದೇ ಇರುವ ಅಂಗಡಿ ಮಾಲೀಕರಿಗೆ ಸೂಕ್ತ ದಂಡ ವಿಧಿಸಿ, ಪಾಲಿಕೆ ವತಿಯಿಂದ ಪರವಾನಿಗೆ ನೀಡಲು ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರು ಈ ಬಗ್ಗೆ ಈಗಾಗಲೇ ಕ್ರಮ ಕೈಗೊಳ್ಳುತ್ತಿರುವ ಬಗ್ಗೆ ಸಭೆಗೆ ತಿಳಿಸಿದರು.

3) ವಾರ್ಡ್ ವ್ಯಾಪ್ತಿಯಲ್ಲಿ ಅನೇಕ ಕಡೆಗಳಲ್ಲಿ ಪಾದಾಚಾರಿ ಮಾರ್ಗವನ್ನು ಒತ್ತುವರಿ ಮಾಡಿಕೊಂಡಿರುವುದರಿಂದ ಪಾದಾಚಾರಿ ಮಾರ್ಗದಲ್ಲಿ ಸಂಚರಿಸುವ ಸಾರ್ವಜನಿಕರ ಮುಖ್ಯರಸ್ತೆಗಳಲ್ಲಿ ಸಂಚರಿಸುತ್ತಿರುವುದರಿಂದ ವಾಹನ ಸವಾರರಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಈ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಆಗಿಂದ್ದಾಗ್ಗೆ ಪಾದಾಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಯನ್ನು ಪಾಲಿಕೆ ವಿವಿಧ ಇಲಾಖೆಗಳನ್ನು ಹಾಗೂ ಪೊಲೀಸರ ನೆರವಿನೊಂದಿಗೆ ಕೈಗೊಳ್ಳುವ ಬಗ್ಗೆ ಕಾರ್ಯದರ್ಶಿ ರವರಿಗೆ ತಿಳಿಸಲಾಯಿತು.

4) ವಾರ್ಡ್ ವ್ಯಾಪ್ತಿಯ ಹಚ್ಚಿನ್ಸ್ ರಸ್ತೆ ಹಾಗೂ ನಾರ್ತ್ ರಸ್ತೆಯಲ್ಲಿ ಕಲ್ವರ್ಟ್ ಹಾಳಾಗಿದ್ದು, ಸದರಿ ರಸ್ತೆಯಲ್ಲಿ ಓಡಾಡುವ ವಾಹನ ಸಂಚಾರಕ್ಕೆ ತೊಂದರೆಯಾಗುತ್ತಿದ್ದು, ಕೂಡಲೇ ಸರಿಪಡಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಸದರಿ ಪ್ರದೇಶದಲ್ಲಿ ಹಾಳಾಗಿರುವ ಕಲ್ವರ್ಟ್‌ಗಳನ್ನು ಸರಿಪಡಿಸಲು ಸೂಚಿಸಿದರು.

5) ವಾರ್ಡ್ ವ್ಯಾಪ್ತಿಯಲ್ಲಿ ಒಂದು ಕಟ್ಟಡದ ಬೇಸ್‌ಮೆಂಟ್ ನಲ್ಲಿ ಬ್ಯಾಂಡ್ ಬಾಕ್ಸ್ ಶಾಪ್ ಅನ್ನು ನಡೆಸುತ್ತಿದ್ದು, ಈ ಶಾಪ್ ನಡೆಸಲು ಪಾಲಿಕೆಯ ವತಿಯಿಂದ ಪರವಾನಿಗೆ ನೀಡಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಸಭೆಯಲ್ಲಿ ಹಾಜರಿದ್ದ ಆರೋಗ್ಯ ನಿರೀಕ್ಷಕರು ಮಾತನಾಡಿ, ಸದರಿ ಸ್ಥಳದ ವಿವರವನ್ನು ನೀಡಿದಲ್ಲಿ ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಲಾಗುವುದೆಂದು ಸಭೆಗೆ ತಿಳಿಸಿದರು.

6) ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಹೈ ಸ್ಟ್ರೀಟ್, ವೀಲರ್ ರಸ್ತೆ ಎಕ್ಸ್‌ಟೆನ್ಷನ್ ಮತ್ತು ಇತರೆ ಪ್ರದೇಶದಲ್ಲಿ ಬೆಂಗಳೂರು ನೀರು ಸರಬರಾಜು ಪೈಪ್‌ಗಳು ಹೊಡೆದು ಹೋಗಿದ್ದು, ಇದರಿಂದ ನೀರು ರಸ್ತೆಗೆ ಹರಿಯುತ್ತಿರುವುದು ಕಂಡುಬಂದಿದ್ದು, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸಿದರು.

7) ವಾರ್ಡ್ ವ್ಯಾಪ್ತಿಯ ನಾಗಯ್ಯನ ಪಾಳ್ಯದಲ್ಲಿರುವ ಜೂಡ್ ಶಾಲೆಯ ಮುಂಭಾಗದಲ್ಲಿ ಚರಂಡಿ ತುಂಬಿ, ನೀರು ರಸ್ತೆಗೆ ಹರಿಯುತ್ತಿರುವುದು ಕಂಡು ಬಂದಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಪ್ರದೇಶದಲ್ಲಿ ಚರಂಡಿಯಲ್ಲಿ ತುಂಬಿರುವ ಹೂಳನ್ನು ತೆಗೆದು ಚರಂಡಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ವಹಿಸಲು ತಿಳಿಸಿದರು.

8) ಮಾರುತಿಸೇವಾನಗರ ವ್ಯಾಪ್ತಿಯ ನಾಗಯ್ಯನಪಾಳ್ಯ ಪ್ರದೇಶದಲ್ಲಿ ಬೀದಿ ದೀಪಗಳು ಸರಿಯಾಗಿ ಉರಿಯದೇ ಇರುವುದರಿಂದ ರಾತ್ರಿ ಸಮಯದಲ್ಲಿ ಹಾಗೂ ಬೆಳಗಿನ ಜಾವದಲ್ಲಿ ಕೆಲಸ ಕಾರ್ಯಗಳಿಗೆ ತೆರಳುವ ನಾಗರೀಕರಿಗೆ ತೊಂದರೆಯಾಗುತ್ತಿದ್ದು, ಇದರಿಂದ ಕಳ್ಳರ ಹಾವಳಿ ಹೆಚ್ಚಾಗುವ ಸಾದ್ಯತೆ ಇರುವುದಾಗಿ, ಈ

ಬಗ್ಗೆ ಕ್ರಮ ವಹಿಸಲು ಸಭೆಗೆ ತಿಳಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸಿದರು.

9) ಮಾರುತಿಸೇವಾನಗರ ವಾರ್ಡ್ ವ್ಯಾಪ್ತಿಯ ಪಾಟರಿ ರಸ್ತೆಯ ಲಾಯ್ಡ್ ರಸ್ತೆ ಹಾಗೂ ಕ್ಲೈನ್ ರಸ್ತೆಗಳಲ್ಲಿ ಬೆಂಗಳೂರು ನೀರು ಸರಬರಾಜು ಪೈಪ್‌ಗಳು ಹೊಡೆದು ಹೋಗಿದ್ದು, ಇದರಿಂದ ನೀರು ರಸ್ತೆಗೆ ಹರಿಯುತ್ತಿರುವುದರಿಂದ ರಸ್ತೆಗಳಲ್ಲಿ ಸಂಚರಿಸುವ ವಾಹನ ಸವಾರರಿಗೆ ಹಾಗೂ ಪಾದಾಚಾರಿಗಳಿಗೆ ತುಂಬಾ ತೊಂದರೆಯಾಗುತ್ತಿರುವ ಬಗ್ಗೆ ಸಭೆಯಲ್ಲಿ ಪ್ರಸ್ತಾಪಿಸಿದಾಗ, ಮಾನ್ಯ ಅಧ್ಯಕ್ಷರು ಮಾತನಾಡಿ ಈ ಬಗ್ಗೆ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ನಿಗಮ ಇಲಾಖೆಯೊಂದಿಗೆ ಮಾತನಾಡಿ, ಈ ಬಗ್ಗೆ ಕೂಡಲೇ ಕ್ರಮ ವಹಿಸಲು ತಿಳಿಸಿದರು.

ಕೊನೆಯದಾಗಿ ಮಾನ್ಯ ಅಧ್ಯಕ್ಷರು / ಕಾರ್ಯದರ್ಶಿಯವರು, ವಾರ್ಡ್ ಸಮಿತಿ ನೋಡೆಲ್ ಅಧಿಕಾರಿಗಳು ಮಾತನಾಡಿ, ಇಂದಿನ ಸಭೆಯಲ್ಲಿ ಚರ್ಚಿಸಿ ತೀರ್ಮಾನಿಸಿರುವ ವಿಷಯಗಳ ಬಗ್ಗೆ ಕೂಡಲೇ ಕ್ರಮ ಕೈಗೊಂಡು ಮುಂದಿನ ಸಭೆಗೆ ತಿಳಿಸಲು ಆದೇಶಿಸಿ, ಸಭೆಯನ್ನು ಮುಕ್ತಾಯಗೊಳಿಸಿದರು.

ವಾರ್ಡ್ ಸಮಿತಿ ಸದಸ್ಯ ಕಾರ್ಯದರ್ಶಿಗಳು
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

ಅಧ್ಯಕ್ಷರು
(ನೋಡೆಲ್ ಅಧಿಕಾರಿಗಳು)
ವಾರ್ಡ್ ಸಂಖ್ಯೆ.59, ಮಾರುತಿಸೇವಾನಗರ

**ಪ್ರತಿಯನ್ನು**

1) ವಲಯ ವಿಶೇಷ ಆಯುಕ್ತರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
2) ಜಂಟಿ ಆಯುಕ್ತರರು (ಪೂರ್ವ) ರವರ ಅವಗಾಹನೆಗಾಗಿ ಸಲ್ಲಿಸಿದೆ.
3) ಮುಖ್ಯ ಅಭಿಯಂತರರು (ಪೂ) ರವರ ಅವಗಾಹನೆಗಾಗಿ ಸಲ್ಲಿಸಿದೆ.
4) ಕಾರ್ಯಪಾಲಕ ಅಭಿಯಂತರರು (ಸರ್ವಜ್ಞನಗರ) ರವರ ಅವಗಾಹನೆಗಾಗಿ.
5) ವಾರ್ಡ್ ಕಮಿಟಿಯ ಸದಸ್ಯರಿಗೆ/ಕಛೇರಿ ಕಡತಕ್ಕೆ.